**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾದೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ,**
ಕುಂದಾಪುರ

ಸಿ.ಸಿ. ನಂಬ್ರಃ **1486/2023**

ಚಾಸಾ-2

| | | |
|---|---|---|
| ವಾಗ್ಮೂಲದವರ ಹೆಸರು | : | ಸಂತೋಷ ಖಾರ್ವಿ |
| ತಂದೆಯ ಹೆಸರು | : | ಕೃಷ್ಣ ಪಟೇಲ್ |
| ವಯಸ್ಸು | : | 42 ವರ್ಷ |
| ಉದ್ಯೋಗ | : | ಮುಖ್ಯಪೇದೆ-100, ಗಂಗೊಳ್ಳಿ ಪೋಲಿಸ ಠಾಣೆ |
| ವಾಸ ಸ್ಥಳ | : | ಗಂಗೊಳ್ಳಿ |

ದಿನಾಂಕಃ *08-01-2025* ರಂದು ಸಾಕ್ಷಿಯನ್ನು ಕರೆಯಿಸಿ ವಿಧಿಬದ್ಧವಾಗಿ ಪ್ರಮಾಣ ವಚನ ಭೋದಿಸಲಾಯಿತು

ಭಾ. ದಂ. ಪ್ರ, ಸಂ, ಕಲಂ 299 ಸಿ ಆರ್ ಪಿ ಸಿ ರಡಿಯಲ್ಲಿ ವಿಚಾರಣೆಃ

ನಾನು ಕಳೆದ 4 ವರ್ಷಗಳಿಂದ ಗಂಗೊಳ್ಳಿ ಪೊಲೀಸ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿರುತ್ತೇನೆ.

ಈ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯದಿಂದ ಒಂದು ಉದ್ಘೋಷಿತ ವಾರಂಟನ್ನು ಆರೋಪಿ ಸಂದೇಶ ಖಾರ್ವಿ ಎಂಬುವರ ವಿರುದ್ಧ ಹೊರಡಿಸಿದ್ದು, ಅದನ್ನು ನಾನು ಪಡೆದುಕೊಂಡು ದಿಃ 18-06-2024 ರಂದು ಮಹಾಕಾಳಿ ದೇವಸ್ಥಾನದ ಹಿಂಭಾಗ, ಖಾರ್ವಿಕೇರಿ, ಗಂಗೊಳ್ಳಿ ಗ್ರಾಮ ಎಂಬಲ್ಲಿಗೆ ಭೇಟಿ ನೀಡಿದ್ದು, ಅಲ್ಲಿನ ಸಾರ್ವಜನಿಕರನ್ನು ವಿಚಾರಿಸಲಾಗಿದ್ದು, ಆರೋಪಿಯ ಬಗ್ಗೆ ಯಾವುದೇ ವಿಚಾರಗಳು ಗೊತ್ತಾಗದೆ ತಲೆಮರೆಸಿಕೊಂಡಿರುವುದಾಗಿ ತಿಳಿದು ಬಂದಿರುತ್ತದೆ. ಆ ಕಾರಣದಿಂದ ನಾನು 30 ದಿನದೊಳಗೆ ನ್ಯಾಯಾಲಯಕ್ಕೆ ಹಾಜರಾಗಬೇಕೆಂದು ಹೇಳಿ ಟಾಂ ಟಾಂ ಮೂಲಕ ಪ್ರಚಾರ ಪಡಿಸಿದ್ದು, ನಂತರ ಉದ್ಘೋಷಿತ ವಾರಂಟಿನ ಪ್ರತಿಯನ್ನು ಗಂಗೊಳ್ಳಿ ಗ್ರಾಮ ಪಂಚಾಯತಿಯ ನೊಟೀಸ್ ಬೋರ್ಡ್ ಮತ್ತು ಗಂಗೊಳ್ಳಿಯ ಬಸ್ ನಿಲ್ದಾಣ ಮತ್ತೊಂದು ಪ್ರತಿಯನ್ನು ಆರೋಪಿಯ ಮನೆಯ ಬಾಗಿಲಿಗೆ ಅಂಟಿಸಿ, ನಂತರ ಸ್ಥಳದಲ್ಲಿ

ಉದ್ಘೋಷಿತ ಮಹಜರನ್ನು ಬೆಳಿಗ್ಗೆ 10-00 ರಿಂದ 11-00 ಗಂಟೆಯವರೆಗೆ ಪಂಚರ ಸಮಕ್ಷಮ ತಯಾರಿಸಿ ಪಂಚರ ಸಹಿಯನ್ನು ಪಡೆದುಕೊಂಡಿರುತ್ತೇನೆ. ನಂತರ ಉದ್ಘೋಷಿತ ಪಂಚನಾಮೆ ಹಾಗೂ ವಾರಂಟನ ಪ್ರತಿಯನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿ ಈ ದಿನ ವಾರಂಟನ್ನು ಹಾಗೂ ಉದ್ಘೋಷಿತ ಪ್ರತಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಸಿ-9 ಮತ್ತು ನಿಸಿ-10 ಎಂದು, ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ತಹಶೀಲ್ದಾರವರು ನೀಡಿದ ವರದಿಯನ್ನು ನಿಪಿ-11 ಎಂದು ಗುರುತಿಸಲಾಯಿತು.

ಆರೋಪಿ ತಲೆಮರೆಸಿಕೊಂಡಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು

**ಮರು ವಿಚಾರಣೆ: ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ. ದ. ನ್ಯಾ ದಂ. ಕುಂದಾಪುರ